561(363) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾವೇರಿ ನ್ಯಾಯ ಮಂಡಳಿಯ ತೀರ್ಪು ಯಾವಾಗ ಬರಬಹುದು?

ಆ) ಕಾವೇರಿ ನ್ಯಾಯ ಮಂಡಳಿಗಾಗಿ ಇದುವರೆವಿಗೂ ಕರ್ನಾಟಕ ರಾಜ್ಯಕ್ಕೆ ಆಗಿರುವ ವೆಚ್ಚ ಎಷ್ಟು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಕಾವೇರಿ ಜಲ ವಿವಾದ ನ್ಯಾಯಾಧೀಕರಣವು ತನ್ನ ಅಂತಿಮ ತೀರ್ಪನ್ನು ದಿನಾಂಕ 05 02 2007 ರಂದು ನೀಡಿದೆ

ಆ) ಕಾವೇರಿ ಜಲ ವಿವಾದ ನ್ಯಾಯಾಧೀಕರಣದ ಯಾವುದೇ ಆಡಳಿತಾತ್ಮಕ ವೆಚ್ಚವನ್ನು ರಾಜ್ಯ ಸರ್ಕಾರವು ಇದುವರೆವಿಗೆ ಭರಿಸಿರುವುದಿಲ್ಲ ನ್ಯಾಯಾಧೀಕರಣದ ಆಡಳಿತಾತ್ಮಕ ವೆಚ್ಚವನ್ನು ನ್ಯಾಯಾಧೀಕರಣವು ದಿನಾಂಕ 05 02 2007 ರಂದು ನೀಡಿರುವ ಅಂತಿಮ ತೀರ್ಪಿನೊಂದಿಗೆ ಸೂಚಿಸಿರುವಂತೆ ಒಟ್ಟು ಮೊತ್ತದ ಶೇಕಡ 40ರಷ್ಟನ್ನು ಕರ್ನಾಟಕವು ಭರಿಸಬೇಕಾಗುತ್ತದೆ

562 (364) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ವಿಶ್ವವಿದ್ಯಾಲಯಗಳಿವೆ, ಅವು ಯಾವುವು ಹಾಗೂ ಎಷ್ಟು ವಿಶ್ವವಿದ್ಯಾಲಯಗಳಿಗೆ ಬೇಡಿಕೆ ಇದೆ?

ಆ) ಹಂಪೆ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 11 ವಿಶ್ವವಿದ್ಯಾಲಯಗಳಿವೆ ಅವು ಈ ಕೆಳಕಂಡಂತಿವೆ,

1) ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು

2) ಮೈಸೂರು ವಿಶ್ವವಿದ್ಯಾಲಯ, ಮೈಸೂರು

3) ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ

4) ಗುಲಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ

5) ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು

6) ಕನ್ನಡ ವಿಶ್ವವಿದ್ಯಾಲಯ, ಹಂಪಿ

7) ಕುವೆಂಪು ವಿಶ್ವವಿದ್ಯಾಲಯ, ಬಿ ಆರ್ ಪ್ರಾಜೆಕ್ಟ್, ಶಿವಮೊಗ್ಗ

8) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು

9) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ

10) ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ

11) ತುಮಕೂರು ವಿಶ್ವವಿದ್ಯಾಲಯ, ತುಮಕೂರು

ಉನ್ನತ ಶಿಕ್ಷಣಕ್ಕೆ ಸಂಬಂಧಿಸಿದಂತೆ ಇಂತಹ ಬೇಡಿಕೆ ಸರ್ಕಾರದ ಮುಂದೆ ಇರುವುದಿಲ್ಲ

ಆ) ಕನ್ನಡ ವಿಶ್ವವಿದ್ಯಾಲಯ, ಹಂಪಿಯ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಅನುದಾನವನ್ನು ಒದಗಿಸುತ್ತಿದೆ

563(365) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ವಸತಿ ಹೀನರ ಸಂಖ್ಯೆ ಎಷ್ಟು, ಇವುಗಳಲ್ಲಿ ಗುಡಿಸಲುಗಳಲ್ಲಿ ವಾಸಿಸುವರ ಸಂಖ್ಯೆ ಎಷ್ಟು, (ಜಿಲ್ಲಾವಾರು ವಿವರ ನೀಡುವುದು)?

ಆ) ಪಟಣ್ಣ ಪ್ರದೇಶದಲ್ಲಿ ಗೃಹ ಮಂಡಳಿ ಈ ವರ್ಷವೂ ಎಷ್ಟು ಮನೆಗಳನ್ನು ನಿರ್ಮಾಣ ಮಾಡಬೇಕಾಗಿದೆ, (ಜಿಲ್ಲಾವಾರು ವಿವರವನ್ನು ಒದಗಿಸುವುದು)?

ಶ್ರೀ ಡಿ ಟಿ ಜಯಕುಮಾರ್ (ವಸತಿ ಸಚಿವರು)

ಅ) ಸ್ಥಳೀಯ ಸಂಸ್ಥೆಗಳ ಮುಖಾಂತರ ಜೂನ್ 2003 ರಲ್ಲಿ ವಸತಿ ರಹಿತರ ಸಮೀಕ್ಷೆಯನ್ನು ಮಾಡಲಾಗಿದ್ದು ಈ ಸಮೀಕ್ಷೆಯ ಪ್ರಕಾರ ಗುಡಿಸಲುಗಳಲ್ಲಿ ವಾಸಿಸುವವರನ್ನು ಒಳಗೊಂಡಂತೆ ರಾಜ್ಯದಲ್ಲಿ ಈ ಕೆಳಗಿನಂತೆ ವಸತಿರಹಿತ ಮತ್ತು ನಿವೇಶನರಹಿತರ ಸಂಖ್ಯೆ ಇರುತ್ತದೆ